1	2		3	4
		14.3.97	24-6-97 ರಲ್ಲಿ ವಾಹನವನ್ನು ಮಧ್ಯಾವಧಿ ಬಿಡುಗಡೆ ಮಾಡಲಾಗಿದೆ.	
49.	ಹೀರೋ ಹೊಂಡಾ	ಸಿಆರ್ ಎಕ್ಸ್-7355	-	ವಿಚಾರಣಾ ಹಂತದಲ್ಲಿದೆ.

ಪರಿಶಿಷ್ಟ ಜಾತಿ ಜನಾಂಗದ ಜನರ ಆರೋಗ್ಯ ರಕ್ಷಣೆಗಾಗಿ ಹಳದಿ ಕಾರ್ಡು ಯೋಜನೆ.

2194 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪರಿಶಿಷ್ಟ ಜಾತಿ ಜನಾಂಗದ ಜನರ ಆರೋಗ್ಯ ರಕ್ಷಣೆಗಾಗಿ ಜಾರಿಗೊಳಿಸಲಾಗಿರುವ ಹಳದಿ ಕಾರ್ಡು ಯೋಜನೆ ಎಷ್ಟು ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ?

2) ಧಾರವಾಡ ಜಿಲ್ಲೆಯಲ್ಲಿ ಈ ಯೋಜನೆಯನ್ನು ಇದೇ ವರ್ಷ ಅನುಷ್ಠಾನಗೊಳಿಸಲಾಗುವುದೆ?

3) ಈ ಯೋಜನೆಯನ್ನು ಜಾರಿಗೊಳಿಸುವ ಜವಾಬ್ದಾರಿಯನ್ನು ಈಗಾಗಲೇ ವೈದ್ಯಕೀಯ ರಂಗದಲ್ಲಿ ಕೆಲಸ ಮಾಡುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ವಹಿಸಿಕೊಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

4) ಈ ಯೋಜನೆ ಅನುಷ್ಠಾನಗೊಂಡಿರುವ ಜಿಲ್ಲೆಗಳಲ್ಲಿ ಯೋಜನೆಯ ಅನುಷ್ಠಾನದ ಪರಿಣಾಮಗಳೇನು? ಈ ಫಲಿತಾಂಶಗಳ ಮೌಲ್ಯಮಾಪನ ಮಾಡಲಾಗಿದೆಯೇ? ಅನುಷ್ಠಾನವನ್ನು ಇನ್ನಷ್ಟು ಉತ್ತಮಪಡಿಸಲು ಸರ್ಕಾರ ಕ್ರಮಗಳನ್ನು ರೂಪಿಸುವುದೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ) :

1) ಹಳದಿ ಕಾರ್ಡು ಯೋಜನೆಯನ್ನು ಮೊದಲು ರಾಜ್ಯದ ಮೈಸೂರು, ಹಾಸನ, ಕೋಲಾರ, ಬಿಜಾಪುರ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ 1994-95ನೇ ಸಾಲಿನಲ್ಲಿ ಜಾರಿಗೊಳಿಸಿದ್ದು, ಈಗ 1997-98ನೇ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ವಿಸ್ತರಿಸಲು ಯೋಜಿಸಲಾಗಿದೆ.

2) ಹೌದು.

3) ಇಲ್ಲ

4) 1994-95ರಲ್ಲಿ ಈ ಯೋಜನೆಯನ್ನು ಜಾರಿಗೊಳಿಸಿದ ಜಿಲ್ಲೆಗಳಲ್ಲಿ ಫಲಾನುಭವಿಗಳಿಂದ ಉತ್ತಮ ಪ್ರತಿಕ್ರಿಯೆ ದೊರೆತಿರುತ್ತದೆ. ಈ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಈ ಯೋಜನೆಯಲ್ಲಿ ಅನುಷ್ಠಾನಗೊಳಿಸಿದ ನಂತರ ಫಲಿತಾಂಶವನ್ನು ಗಣನೆಗೆ ತೆಗೆದುಕೊಂಡು ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಕ್ರಮಗಳನ್ನು ರೂಪಿಸಲಾಗುವುದು.

ಚಿಕ್ಕಪೇಟೆ ಕ್ಷೇತ್ರದಲ್ಲಿ ಶಾಲೆಗಳ ದುರಸ್ತಿಯಾಗದೆ ಇರುವುದು.

2195 - ಶ್ರೀ ಪ್ರಕಾಶ್ ಪಿ.ಎಸ್ (ಚಿಕ್ಕಪೇಟೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಪೇಟೆ ಕ್ಷೇತ್ರದ ಸರ್ಕಾರಿ ಶಾಲೆಗಳು ದುರಸ್ತಿಯಾಗದೇ ಹಾಗೂ ಶಿಥಿಲಗೊಂಡಿರುವ ಶಾಲೆಗಳ ಸಂಖ್ಯೆ ಎಷ್ಟು?

ಆ) ಮೇಲ್ಕಂಡ ಶಾಲೆಗಳನ್ನು ಕೂಡಲೇ ಸುವ್ಯವಸ್ಥೆಗೊಳಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) 03

1) ಸರ್ಕಾರಿ ಉರ್ದು ಮಾದರಿ ಪ್ರಾಥಮಿಕ ಶಾಲೆ, ಸುಲ್ತಾನಪೇಟೆ,

2) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ವಿದ್ಯಾ ಗಣಪತಿ) ಅರಳೇಪೇಟೆ.

3) ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ (ಗಣೇಶ) ಸುಲ್ತಾನಪೇಟೆ.

ಆ) ಈ ಶಾಲೆಗಳ ದುರಸ್ತಿ ಕಾರ್ಯಕ್ಕಾಗಿ ಹಣ ಬಿಡುಗಡೆ ಮಾಡಿದ್ದು ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

50ನೇ ವರ್ಷದ ಸ್ವಾತಂತ್ರ ದಿನಾಚರಣೆ

2196 - ಶ್ರೀ ಎನ್. ರಾಜಣ್ಣ (ಭಾರತಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಎ) 50ನೇ ವರ್ಷದ ಸ್ವಾತಂತ್ರ ದಿನಾಚರಣೆ

ಬಿ) 50ನೇ ವರ್ಷದ ಸ್ವಾತಂತ್ರ ದಿನಾಚರಣೆಯನ್ನು ವಿಜೃಂಭಣೆಯಿಂದ ಶಾಲಾ ಕಾಲೇಜುಗಳಲ್ಲಿ ಆಚರಿಸಲು ವಿಶೇಷ ಅನುದಾನ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಿದೆಯೇ?

ಸಿ) ಇಲ್ಲದಿದ್ದಲ್ಲಿ ಸರ್ಕಾರವು ವಿಶೇಷ ಅನುದಾನವನ್ನು ಶಾಲಾ ಕಾಲೇಜುಗಳಿಗೆ ಬಿಡುಗಡೆ ಮಾಡುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುತ್ತದೆಯೇ?